**ಕೃಷಿ ವಿಶ್ವ ವಿದ್ಯಾನಿಲಯ**

**ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)**

**ಜಿ.ಕೆ.ವಿ.ಕೆ., ಬೆಂಗಳೂರು–560065**

*** ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ ***

**ದಿನಾಂಕ:** 28.07.2023

## ಬೆಂಗಳೂರು ನಗರ ಜಿಲ್ಲೆಗೆ ಸೀಮಿತವಾಗಿದೆ.

### ಕಳೆದ ಐದು ದಿನಗಳ ಹವಾಮಾನ ಸಾರಂಶ

| ನಿಯತಾಂಕಗಳು | 24.07.2023 | 25.07.2023 | 26.07.2023 | 27.07.2023 | 28.07.2023 |
|---|---|---|---|---|---|
| ಮಳೆ (ಮಿ ಮೀ) | 12.4 | 15.0 | 10.8 | 15.4 | 0 |
| ಗರಿಷ್ಠ ಉಷ್ಣಾಂಶ (ಡಿ.ಸೆ. ) | 27.0 | 26.2 | 25.4 | 24.0 | 25.0 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 19.2 | 18.0 | 18.0 | 18.2 | 18.0 |
| ಮೋಡ (ಪ್ರಮಾಣ) | 4 | 6 | 6 | 6 | 4 |
| ಆರ್ದ್ರತೆ 7.20 ಬೆ (ಶೇ) | 82 | 84 | 81 | 83 | 75 |
| ಆರ್ದ್ರತೆ 2.20 ಮ (ಶೇ) | 75 | 71 | 80 | 73 | -- |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 6.8 | 7.3 | 6.3 | 6.7 | 5.8 |
| ಗಾಳಿಯ ದಿಕ್ಕು (ಡಿಗ್ರಿ) | 230 | 230 | 320 | 230 | 230 |

### ಈ ವಾರದ ಹವಾಮಾನ ಮುನ್ಸೂಚನೆ (ಭಾರತೀಯ ಹವಾಮಾನ ಇಲಾಖೆ)

**(ದಿನಾಂಕ 29–07–2023 ರಿಂದ 02–08–2023 ವರೆಗೆ)**

| ನಿಯತಾಂಕಗಳು | 29.07.2023 | 30.07.2023 | 31.07.2023 | 01.08.2023 | 02.08.2023 |
|---|---|---|---|---|---|
| ಮಳೆ (ಮಿ ಮೀ) | 3 | 1 | 1 | 1 | 1 |
| ಗರಿಷ್ಠ ಉಷ್ಣಾಂಶ (ಡಿ.ಸೆ. ) | 27 | 29 | 29 | 29 | 29 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 20 | 20 | 20 | 20 | 20 |
| ಮೋಡ (ಪ್ರಮಾಣ) | 7 | 6 | 5 | 7 | 8 |
| ಆರ್ದ್ರತೆ 7.20 ಬೆ (ಶೇ) | 88 | 88 | 87 | 87 | 87 |
| ಆರ್ದ್ರತೆ 2.20 ಮ (ಶೇ) | 70 | 70 | 68 | 68 | 68 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 5 | 4 | 4 | 5 | 5 |
| ಗಾಳಿಯ ದಿಕ್ಕು (ಡಿಗ್ರಿ) | 288 | 292 | 288 | 288 | 288 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರದಿಂದ ಸಾದಾರಣ ಮಳೆಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ **27.0-29.0$^{o}$C** ಮತ್ತು ಕನಿಷ್ಠ **20.0$^{o}$C** ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **87-88** % ಇದ್ದು **68-70** % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **4-5** ಕಿ.ಮೀ. ವೇಗದಲ್ಲಿ ಬೀಸುವ ಸ0ಭವವಿದೆ.

**"ಆರಿದ್ರದಲ್ಲಿ ಆದಷ್ಟು ಬಿತ್ತು , ಆರಿದ್ರ ಇಲ್ಲದಿದ್ರೆ ದರಿದ್ರ"**

- ಪುಷ್ಯ ನಕ್ಷತ್ರದ ಮಳೆಯ ಕಾಲವು ಜುಲೈ ತಿಂಗಳ 20 ರಿಂದ ಆಗಸ್ಟ್ 02 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 56.4 ಮಿ.ಮೀ. ವರೆಗೆ ಮಳೆಯಾಗುತ್ತದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| **ಸಾಮಾನ್ಯ** | | • ತೇವಾಂಶದ ಆಧಾರದಲ್ಲಿ ಮುಂಗಾರು ಬಿತ್ತನೆಯನ್ನು ಮುಂದುವರಿಸಿ. ಆಯಾ ವಲಯ ಪ್ರದೇಶಕ್ಕೆ ಶಿಫಾರಸ್ಸು ಮಾಡಿದ ತಳಿಗಳನ್ನೇ ಬಿತ್ತನೆಗೆ ಬಳಸುವುದು ಸೂಕ್ತ.<br>• ಗಾಳಿಯ ವೇಗವು ಹೆಚ್ಚಾಗಿರುವುದರಿಂದ ಬಾಳೆ ಮತ್ತು ಇನ್ನಿತರ ತರಕಾರಿ ಬೆಳೆಗಳಿಗೆ ರಕ್ಷಣೆ ಕೊಡಿ.<br>• ಗಾಳಿಯ ವೇಗವು ಹೆಚ್ಚಾಗಿರುವ್ಯದರಿಂದ ಕೃಷಿ ಮತ್ತು ತೋಟಗಾರಿಕಾ ಬೆಳೆಗಳಲ್ಲಿ ಔಷದ |

| | | |
|---|---|---|
| | | ಸಿಂಪಡಣೆಯನ್ನು ಮುಂದೂಡಿ |
| **ಮುಂಗಾರು ಬೆಳೆಗಳು** | ಬಿತ್ತನೆ ಮತ್ತು ಮೊಳಕೆ, ಬೆಳವಣಿಗೆ ಹಂತ | **ಈ ಕೆಳಗಿನ, ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>ರಾಗಿ : ಎಂ.ಆರ್–1 ಮತ್ತು 6, ಜಿ.ಪಿ.ಯು–28, ಹೆಚ್.ಆರ್–911, ಎಂ.ಎಲ್–365<br>ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1<br>ಹೆಸರು :ಪಿ.ಎಸ್–16, ಪಿ.ಡಿ.ಎಮ್–84, 178 , ಉದ್ದು: ಕರಗಾವ್–3, ಟಿ–9, ರಶ್ಮಿ<br>➢ ಈಗಾಗಲೇ ಮೇ ಮತ್ತು ಜೂನ್ ತಿಂಗಳಲ್ಲಿ ಬಿತ್ತನೆ ಮಾಡಿರುವಂತಹ ದೀರ್ಘಾವಧಿ ಬೆಳೆಗಳಾದ ತೊಗರಿ, ಹರಳು ಬಿತ್ತನೆಯಾಗಿದ್ದಲ್ಲಿ ಮೇಲೆ ತಿಳಿಸಿರುವ ಬೇಸಾಯ ಕ್ರಮಗಳ ಜೊತೆಗೆ, ಸಾಲುಗಳ ಮಧ್ಯದಲ್ಲಿರುವ ಮಣ್ಣನ್ನು ಗಿಡದ ಬುಡಕ್ಕೆ ಹಾಕುವುದರಿಂದ ಭೂಮಿಯು ದಿಂಡು ಸಾಲಾಗಿ ಪರಿವರ್ತನೆಯಾಗುತ್ತದೆ ಇದರಿಂದ ಗಿಡಗಳಿಗೆ ಹೆಚ್ಚು ಸಿಗುವಂತಾಗಿ ಒಣಹವೆಯ ಅನಾನುಕೂಲತೆಯನ್ನು ಮುಂದೂಡಬಹುದು.<br>➢ ಆರ್ದ್ರತೆ ಹೆಚ್ಚಿರುವುದರಿಂದ ಬಿತ್ತನೆ ಮಾಡಿರುವ ಬೆಳೆಗಳಲ್ಲಿ ಕೀಟ ಹಾಗೂ ರೋಗಗಳು ಹೆಚ್ಚಬಹುದು. ಆದುದರಿಂದ ಬೆಳೆಗಳನ್ನಾಧರಿಸಿ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಬೇಕು.<br>➢ ಈಗಾಗಲೇ ಬಿತ್ತನೆಯಾಗಿರುವ ತೊಗರಿ ಮತ್ತು ಜೋಳದ ಬೆಳೆಗಳಲ್ಲಿ ಮೇಲು ಗೊಬ್ಬರವನ್ನು ಕೊಡಬೇಕು. |
| **ಮಾವು** | | ➢ ಕಳೆ ನಿರ್ವಹಣೆಗೆ ಮತ್ತು ಭೂಮಿಯಲ್ಲಿನ ತೇವಾಂಶವನ್ನು ಸಂರಕ್ಷಿಸಲು ಅಂತರ ಬೇಸಾಯ ಮಾಡಬೇಕು. |
| **ಪಶುಸಂಗೋಪನೆ** | | 1. ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.)<br>2. ಹೆಚ್ಚು ಪಶು ಆಹಾರ ತಿನ್ನಿಸುವ ಸಮಯದಲ್ಲಿ ಅದನ್ನು 3–4 ಸಮಭಾಗ ಮಾಡಿ ನಿತ್ಯ ನಾಲ್ಕು ಬಾರಿ ತಿನ್ನಿಸುವುದು ಉತ್ತಮ.<br>3. ಬೆಳೆಯಲ್ಲಿ ಶೇ. 65–70 ರಷ್ಟು ತೇವಾಂಶ ಇರಬೇಕು. ತೇವಾಂಶ ಇದಕ್ಕಿಂತಲೂ ಕಡಿಮೆಯಾದರೆ ಹುದುಗುವಿಕೆ ವಿಫಲಗೊಂಡು ಕಳಪೆ ಗುಣಮಟ್ಟದ ಕಂದು ಬಣ್ಣದ ರಸಮೇವು ತಯಾರಾಗುತ್ತದೆ. ಇದೇ ರೀತಿ ಮೇವಿನಲ್ಲಿ ತೇವಾಂಶ ಶೇ.70 ಕ್ಕಿಂತಲೂ ಹೆಚ್ಚಿದ್ದರೆ ರಸಸಾರ ಹೆಚ್ಚಾಗಿ ಮೇವು ಹುಳಿಯಾಗಿ ಕೊಳೆತ ವಾಸನೆಯಿಂದ ಕೂಡಿರುತ್ತದೆ. |


**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**


**ಮೊಬೈಲ್ ಆಪ್:**

- ➢ ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ➢ ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.